ಜೆಎಸ್‌ಎಸ್ ಮಹಾವಿದ್ಯಾಪೀಠ
**ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು**
(ಸ್ವಾಯತ್ತ)
**ಊಟಿ ರಸ್ತೆ, ಮೈಸೂರು – 570 025**
ಪ್ರಚ್ಛನ್ನ ಉತ್ಕೃಷ್ಟತಾ ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)
Ph: 0821-2548236 & 2548380. FAX: 0821-2548238 E-mail: jssautonomous@gmail.com Website: JSSCACS.edu.in

ದಿನಾಂಕ 20.07.2023

**ಪ್ರಕಟಣೆಯ ಕೃಪೆಗಾಗಿ**

ಕ್ರೀಡಾ ಸ್ಪರ್ಧಿಗಳಿಗೆ ಮತ್ತು ಸಾಂಸ್ಕೃತಿಕ ಕಲಾವಿದರಿಗೆ ಪ್ರೋತ್ಸಾಹ ಬೇಕು

– ಪ್ರೊ . ಎಸ್.ಎನ್. ಹೆಗ್ಡೆ

"ಕ್ರೀಡೆ ಮತ್ತು ಸಾಂಸ್ಕೃತಿಕ ಪ್ರತಿಭೆ ಎಲ್ಲರಲ್ಲೂ ಇರುವುದಿಲ್ಲ. ಯಾರಿಗೆ ಯಾವುದರಲ್ಲಿ ಆಸಕ್ತಿಯಿದೆ ಎಂಬುದನ್ನು ಗುರುತಿಸಿ ಅಂಥವರನ್ನು ಪ್ರೋತ್ಸಾಹಿಸಬೇಕು.ಈ ಕೆಲಸವನ್ನು ಅಧ್ಯಾಪಕರು ಮಾಡಬೇಕು. ಕ್ರೀಡಾ ಸ್ಪರ್ಧಿಗಳಿಗೆ ಮತ್ತು ಸಾಂಸ್ಕೃತಿಕ ಕಲಾವಿದರಿಗೆ ಪ್ರೋತ್ಸಾಹ ಬೇಕು" ಮೈಸೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿಗಳಾದ ಪ್ರೊ. ಎಸ್.ಎನ್. ಹೆಗ್ಡೆ ಅವರು ಹೇಳಿದರು.

ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ಪದವಿ ವಿಭಾಗದ ವತಿಯಿಂದ ಏರ್ಪಡಿಸಲಾಗಿದ್ದ ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆಗಳ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಅವರು ಮಾತನಾಡಿದರು. "ಕಾಲೇಜಿನಲ್ಲಿ ಲಲಿತಕಲಾ ವಿಭಾಗವೊಂದನ್ನು ತೆರೆಯಬೇಕು .ಏಕೆಂದರೆ ಕ್ರೀಡಾ ಸ್ಪರ್ಧಿಗಳಿಗೆ ಮತ್ತು ಸಾಂಸ್ಕೃತಿಕ ಕಲಾವಿದರಿಗೆ ಪ್ರೋತ್ಸಾಹ ಬೇಕಾಗುತ್ತದೆ. ದೇಶಕ್ಕೆ ವಿಜ್ಞಾನಿಗಳು, ವಾಣಿಜ್ಯೋದ್ಯಮಿಗಳು, ವೈದ್ಯರು, ಲಾಯರುಗಳು ಬೇಕಾಗಿರುವಂತೆಯೇ ಕವಿಗಳು, ಕಲಾವಿದರು, ಕ್ರೀಡಾಪಟುಗಳೂ ಬೇಕಾಗಿದ್ದಾರೆ. ಭಾರತೀಯರು ಯಾವುದಕ್ಕೂ ಕಡಿಮೆಯಿಲ್ಲ. ವಿಜ್ಞಾನ, ತಂತ್ರಜ್ಞಾನ, ಸಾಂಸ್ಕೃತಿಕ ಕಲೆಗಳಲ್ಲಿ ಉತ್ತಮರಾಗಿದ್ದಾರೆ. ರವೀಂದ್ರನಾಥ ಟ್ಯಾಗೊರ್ ಮತ್ತು ಸರ್.ಸಿ.ವಿ. ರಾಮನ್ ಅವರು ನಮ್ಮ ದೇಶಕ್ಕೆ ನೊಬೆಲ್ ಪ್ರಶಸ್ತಿಯನ್ನು ತಂದು ಕೊಟ್ಟಿದ್ದಾರೆ. ಆದ್ದರಿಂದ ಯುವಕರಿಗೆ, ಯುವಶಕ್ತಿಯ ಪ್ರತಿಭೆಗೆ ಪ್ರೋತ್ಸಾಹ ಬೇಕು. ಆಗ ಮಾತ್ರ ಪ್ರತಿಭೆ ಪ್ರಕಾಶಿಸುತ್ತದೆ. ವಿದ್ಯಾರ್ಥಿಗಳಿಗೆ ಪಠ್ಯದಷ್ಟೇ ಕ್ರೀಡೆಯೂ ಮುಖ್ಯ . ಇಂದು ಓದಿನಲ್ಲಿ, ಕ್ರೀಡೆಗಳಲ್ಲಿ ಸವಾಲುಗಳು ಮತ್ತು ಸ್ಪರ್ಧೆಗಳು ಬಹಳ ಇವೆ. ಸವಾಲುಗಳನ್ನು ಸ್ವೀಕರಿಸುವ ಮನೋಭಾವ ಕ್ರೀಡೆಯಿಂದ ಮಾತ್ರ ಸಿಗುತ್ತದೆ. ಅನೇಕರು ಹಿಮಾಲಯವನ್ನು ಕಷ್ಟಪಟ್ಟು ಹತ್ತಲು ಮುಖ್ಯ ಕಾರಣ ಅವರಲ್ಲಿ ಇರುವ ಸವಾಲನ್ನು ಎದುರಿಸುವ ಗುಣವೇ ಆಗಿರುತ್ತದೆ. ಕ್ರೀಡೆಯಿಂದ ದೈಹಿಕ ಮತ್ತು ಮಾನಸಿಕ ದೃಢತೆ ಉಂಟಾಗುತ್ತದೆ. ಒತ್ತಡದಿಂದ ಮುಕ್ತರಾಗಲು ಮಾತ್ರವಲ್ಲದೆ, ನಮ್ಮ ಮುಂದಿನ ಆರೋಗ್ಯದ ಜೀವನಕ್ಕೂ ಕಾರಣವಾಗುತ್ತದೆ. ಪಠ್ಯ ಮತ್ತು ಓದು ನಮಗೆ ವೃತ್ತಿಯನ್ನು ಕಲ್ಪಿಸಬಹುದಾದರೂ ವ್ಯಕ್ತಿಗೆ ಪ್ರವೃತ್ತಿಯೂ ಅಷ್ಟೇ ಮುಖ್ಯ. ಅಮೇರಿಕಾದಂತಹ ರಾಷ್ಟ್ರದಲ್ಲಿ ವೃತ್ತಿಗಿಂತ ಪ್ರವೃತ್ತಿಗೆ ಪ್ರಾಮುಖ್ಯವನ್ನು ನೀಡುತ್ತಾರೆ. ಪ್ರವೃತ್ತಿಯನ್ನೇ ನಂಬಿ ಅದರಲ್ಲೇ ಸಾಧನೆ ಮಾಡಿದವರು ಬಹಳ ಜನ ಇದ್ದಾರೆ. ದೌರ್ಬಲ್ಯಗಳು ಎಲ್ಲರಲ್ಲೂ ಇರುತ್ತದೆ. ಅದನ್ನು ಮೀರಿ ಸಾಧಿಸುವ ಗುರಿ ವಿದ್ಯಾರ್ಥಿಗಳಲ್ಲಿ ಇರಬೇಕು" ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ .ಬಿ.ವಿ. ಸಾಂಬಶಿವಯ್ಯನವರು ಮಾತನಾಡಿ "ಶಿಕ್ಷಣ ಸಂಸ್ಥೆ ಕೇವಲ ಪದವಿ ನೀಡುವ ಕಾರ್ಖಾನೆಗಳಾಗದೆ ಅವರ

ವ್ಯಕ್ತಿತ್ವವನ್ನೂ ನಿರ್ಮಿಸುವಲ್ಲಿ ಸಫಲವಾಗಬೇಕು. ಅದಕ್ಕಾಗಿ ಪಠ್ಯ ಮತ್ತು ಪಠ್ಯಪೂರಕ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳನ್ನು ತೊಡಗುವಂತೆ ಮಾಡಬೇಕು. ನಮ್ಮ ಕಾಲೇಜಿನಲ್ಲಿಯೂ ಕ್ರೀಡಾ ಮತ್ತು ಸಾಂಸ್ಕೃತಿಕ ವೇದಿಕೆಗಳನ್ನು ನಿರ್ಮಿಸಿ ವಿದ್ಯಾರ್ಥಿಗಳ ಪ್ರತಿಭೆಯನ್ನು ಗುರುತಿಸುವ, ಪ್ರೋತ್ಸಾಹಿಸುವ ಕೆಲಸವನ್ನು ಮಾಡಲಾಗುತ್ತಿದೆ. ಕೌಶಲ್ಯಾಧಾರಿತ ಶಿಕ್ಷಣಕ್ಕೆ ಇಂದು ಹೆಚ್ಚು ಬೇಡಿಕೆ ಇರುವುದರಿಂದ ಶಿಕ್ಷಣದ ಜೊತೆಗೆ ಕೌಶಲ್ಯದ ಕಡೆಗೆ ಹೆಚ್ಚು ಗಮನ ನೀಡಬೇಕು. ಯಾವುದೇ ಸ್ಪರ್ಧೆಗಳಲ್ಲಿ ಭಾಗವಹಿಸುವಿಕೆ ಮುಖ್ಯವೇ ಹೊರತು ಬಹುಮಾನ ಗಳಿಸುವುದಲ್ಲ. ಬಹುಮಾನ ಕೆಲವರಿಗೇ ದೊರೆತರೂ ಭಾಗವಹಿಸಿದವರೆಲ್ಲಾ ವಿಜೇತರೇ ಆಗಿದ್ದಾರೆ" ಎಂದು ತಿಳಿಸಿದರು.

ಕಾಲೇಜಿನ ಸಾಂಸ್ಕೃತಿಕ ಮತ್ತು ಕ್ರೀಡಾ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಗಣ್ಯರು ಬಹುಮಾನವನ್ನು ವಿತರಿಸಿದರು. ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಎಂ.ಪಿ. ವಿಜಯೇಂದ್ರಕುಮಾರ್, ಸಾಂಸ್ಕೃತಿಕ ವೇದಿಕೆಯ ಸಂಚಾಲಕರಾದ ಡಾ. ಸಿ.ಆರ್. ಮಧುಸೂದನ್, ಕ್ರೀಡಾ ವೇದಿಕೆಯ ಸಂಚಾಲಕರಾದ ಶ್ರೀ. ಎಂ. ಕಾರ್ತಿಕ್ ಅವರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಕು. ನಿರಂಜಿನಿ ಭಾರ್ಗವ್ ಪ್ರಾರ್ಥಿಸಿದರು, ಕು. ಆರ್.ವಿ. ಅನನ್ಯ ಸ್ವಾಗತಿಸಿದರು. ಕು. ಅನೂಷ ವಂದಿಸಿದರು. ಕು. ಬಿ.ಎಂ. ಅಕ್ಷಯ್ ನಿರೂಪಿಸಿದರು.

ಪ್ರಾಂಶುಪಾಲರು

ಗೆ,

ಸಂಪಾದಕರು

--------------------

----------------------